**PW**–1

**ಸಾಕ್ಷಿಯನ್ನು ದಿನಾಂಕ 05.03.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ : ವಾದಿ ಪರ ವಕೀಲರಿಂದಃ**

**ನಾನು ಈ ದಾವೆಯ ವಾದಿಯ ಪರ ಜಿ.ಪಿ.ಎ ಹೋಲ್ಡರ್ ನಿದ್ದು, ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ವಿಚಾರಗಳು ಸತ್ಯವಾಗಿರುತ್ತದೆ ಮತ್ತು ಅದಕ್ಕೆ ನಾನು ನನ್ನ ಸಹಿ ಹಾಕಿರುತ್ತೇನೆ.**

ದಿಃ 03.03.2025 ರ ಜಿ.ಪಿ.ಎ. ನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–1 ಎಂದು ಗುರುತಿಸಲಾಯಿತು.

ಬೇಗೂರು ಗ್ರಾಮದ ಸರ್ವೆ ನಂ. 89/1ಎ1 ರ ಎರಡು ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ–2 ಮತ್ತು 3 ಎಂದು ಗುರುತಿಸಲಾಯಿತು.

ಬೇಗೂರು ಗ್ರಾಮದ ಸರ್ವೆ ನಂ. 260 ರ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–4 ಎಂದು ಗುರುತಿಸಲಾಯಿತು.

ಬೆಳಚಲವಾಡಿ ಗ್ರಾಮದ ಸರ್ವೆ ನಂ. 67 ರ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–5 ಎಂದು ಗುರುತಿಸಲಾಯಿತು.

ಋಣಭಾರರಾಹಿತ್ಯ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–6 ಎಂದು ಗುರುತಿಸಲಾಯಿತು.

ದಿಃ 05.12.2011 ರ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–7 ಎಂದು ಗುರುತಿಸಲಾಯಿತು.

ಪಿ.ಡಿ.ಓ ಗ್ರಾಮ ಪಂಚಾಯಿತಿ, ಬೇಗೂರು ರವರು ನೀಡಿರುವ ದೃಢೀಕರಣ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–8 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಗಾಗಿ ವಕೀಲರು ಸಮಯ ಕೋರಲಾಗಿ, ಅನುಮತಿ ನೀಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇಳಿ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್

ಗುಂಡ್ಲುಪೇಟೆ